28/12/22

148th, ಕ್ರ.ಸಂ.49

**ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೆ.ಅಬ್ದುಲ್ ಜಬ್ಬಾರ್ ಮತ್ತು ಶ್ರೀ ಸಲೀಂ ಅಹ್ಮದ್ ರವರು ಶೂನ್ಯವೇಳೆಯಲ್ಲಿ ಮಂಡಿಸಿರುವ ಪ್ರಸ್ತಾವನೆಗೆ ಉತ್ತರ**

******

ಪ್ರಶ್ನೆ: ಡಿಸೆಂಬರ್ 24, 2022ರ ಶನಿವಾರ ರಾತ್ರಿ ಸೂರತ್ಕಲ್ ಕೃಷ್ಣಾಪುರ 4ನೇ ಬ್ಲಾಕ್‌ನ ನೈತಂಗಡಿಯಲ್ಲಿ ದಿನಸಿ ಅಂಗಡಿ ಹೊಂದಿದ್ದ ಜಲೀಲ್ ಎಂಬುವವರನ್ನು ಅವರ ಅಂಗಡಿಯಲ್ಲಿ ಇದ್ದ ವೇಳೆ ಅವರ ಎದೆಯ ಭಾಗಕ್ಕೆ ಚೂರಿ ಇರಿದು ದುಷ್ಕರ್ಮಿಗಳು ಪರಾರಿಯಾಗಿದ್ದಾರೆ. ಇದರಿಂದ ತೀವ್ರಗಾಯಗೊಂಡಿದ್ದ ಜಲೀಲ್ ರನ್ನು ಖಾಸಗಿ ಮೆಡಿಕಲ್ ಕಾಲೇಜು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಜಲೀಲ್ ಸಾವನ್ನಪ್ಪಿದ್ದಾರೆ. ಸುರತ್ಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದುಷ್ಕರ್ಮಿಗಳಿಂದ ಚೂರಿ ಇರಿತಕ್ಕೊಳಗಾಗಿ ಸಾವನ್ನಪ್ಪಿರುವ ಜಲೀಲ್ ಯಾವುದೇ ಗಲಾಟೆಗೆ ಹೋಗದ ಬಡಪಾಯಿಯಾಗಿದ್ದು, ಬೆಳಿಗ್ಗೆ ಅಂಗಡಿಗೆ ಬಂದು ವ್ಯವಹಾರ ಮಾಡಿ ರಾತ್ರಿ ಮನೆಗೆ ಹೋಗುತ್ತಿದ್ದ. ಆತ ಹಿಂದೂ, ಮುಸ್ಲಿಂ ಕ್ರಿಶ್ಚಿಯನ್ ಎಲ್ಲರಿಗೂ ಬೇಕಾದವನಾಗಿದ್ದ. ಯಾವುದೇ ಚಟುವಟಿಕೆಗೆ ಹೋಗದ ಆತ ಶಾಂತಿಪ್ರಿಯನಾಗಿದ್ದು, ಅವನಿಗೆ ಶತ್ರುಗಳು ಅಂತ ಯಾರೂ ಇರಲೇ ಇಲ್ಲ. ಇದು ರಾಜಕಾರಣಕ್ಕಾಗಿ ಅಮಾಯಕನ ಕೊಲೆಯಾಗಿದೆ.

ರಾಜ್ಯ ಸರ್ಕಾರ ಮೃತರ ಕುಟುಂಬಕ್ಕೆ ಕೂಡಲೇ ಸೂಕ್ತ ಪರಿಹಾರವನ್ನು ಕೊಡಬೇಕು ಹಾಗೂ ನೈಜ ಆರೋಪಿಗಳನ್ನು ಬಂಧಿಸಬೇಕು. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಿರಂತರವಾಗಿ ಕೊಲೆಗಳು ನಡೆಯುತ್ತಿವೆ. ಮುಸ್ಲಿಮರ ಮೇಲೆ ನೈತಿಕ ಪೊಲೀಸ್ ಗಿರಿ, ಹಲ್ಲೆಗಳು ಹೆಚ್ಚಾಗುತ್ತಿದೆ. ಕೆಲವು ಸಂಘಟನೆಗಳು ಕಾನೂನನ್ನು ಕೈಗೆತ್ತಿಕೊಳ್ಳುತ್ತಿವೆ. ಕೊಲೆಗಳನ್ನು ನಡೆಸಿ ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುವವರನ್ನು ಕೂಡಲೇ ಮಟ್ಟಹಾಕಬೇಕೆಂದು ಒತ್ತಾಯಿಸುವ ಕುರಿತು.

ಉತ್ತರ: ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಸೂರತ್ಕಲ್ ಪೊಲೀಸ್ ಠಾಣಾ ಸರಹದ್ದಿನ 4ನೇ ಬ್ಲಾಕ್‌ನಲ್ಲಿರುವ ಉಮರಬ್ಬ ರವರ ಕಟ್ಟಡದಲ್ಲಿ ಫ್ಯಾನ್ಸಿ ಅಂಗಡಿಯನ್ನು ನಡೆಸುತ್ತಿದ್ದ ಶ್ರೀ ಅಬ್ದುಲ್ ಜಲೀಲ್ @ ಜಲೀಲ್ ಎಂಬವರನ್ನು ಯಾರೋ ಇಬ್ಬರು ಅಪರಿಚಿತ ಯುವಕರು ದಿನಾಂಕ: 24.12.2022 ರಂದು ರಾತ್ರಿ 7:50 ಗಂಟೆಗೆ ಯಾವುದೋ ಕಾರಣದಿಂದ ದ್ವೇಷಗೊಂಡು ಅಂಗಡಿಯ ಒಳಗೆ ನುಗ್ಗಿ ಎದೆಗೆ ಹಾಗು ಬೆನ್ನಿಗೆ ಚೂರಿಯಿಂದ ಇರಿದು ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದು, ಹಲ್ಲೆಗೊಳಗಾದ ಜಲೀಲ್ ರವರನ್ನು ಸ್ಥಳೀಯರು ಚಿಕಿತ್ಸೆಗಾಗಿ ಸೂರತ್ಕಲ್ ಠಾಣಾ ಸರಹದ್ದಿನ ಮುಕ್ಕ ಎಂಬಲ್ಲಿರುವ ಶ್ರೀನಿವಾಸ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗದೇ ಜಲೀಲ್ ರವರು ಮೃತಪಟ್ಟಿರುತ್ತಾರೆ. ಈ ಬಗ್ಗೆ ಜಲೀಲ್ ರವರ ಸಂಬಂಧಿ ಶ್ರೀ ಅಬ್ದುಲ್ ಖಾದರ್ ಬಿನ್ ಕೆ.ಎಂ ಮೈಯ್ಯದ್ದಿ ಎಂಬವರು ಸೂರತ್ಕಲ್ ಠಾಣೆಯಲ್ಲಿ ಅದೇ ದಿನ ದಿನಾಂಕ: 24.12.2022 ರಂದು ರಾತ್ರಿ 9:45 ಗಂಟೆಗೆ ನೀಡಿದ ದೂರಿನಂತೆ ಸೂರತ್ಕಲ್ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ 109/2022 ಕಲಂ: 448, 302 ಜೊತೆಗೆ 34 ಐ.ಪಿ.ಸಿ ರಂತೆ ಪ್ರಕರಣ ದಾಖಲಾಗಿರುತ್ತದೆ.

ನಂತರ ಮೃತ ಜಲೀಲ್‌ರವರ ಮೃತದೇಹವನ್ನು ಮುಕ್ಕ ಶ್ರೀನಿವಾಸ್ ಆಸ್ಪತ್ರೆಯಿಂದ ಮಂಗಳೂರಿನ ಎ.ಜೆ. ಆಸ್ಪತ್ರೆಗೆ ಸಾಗಿಸಿ ಅಲ್ಲಿ ಮರಣೋತ್ತರ ಶವ ಪರೀಕ್ಷೆಯನ್ನು ನಡೆಸಲಾಯಿತು. ನಂತರ ಮೃತದೇಹವನ್ನು ಮುಂದಿನ ದಫನ ಕಾರ್ಯಕ್ಕೆ ಮೃತನ ಸಂಬಂಧಿಕರಿಗೆ ಬಿಟ್ಟುಕೊಡಲಾಗಿರುತ್ತದೆ. ಮೃತದೇಹವನ್ನು ಆತನ ಸಂಬಂಧಿಕರು ಸೂರತ್ಕಲ್ ಕಾಟಿಪಳ್ಳಕ್ಕೆ ತೆಗೆದುಕೊಂಡು ಹೋಗಿದ್ದು ಆ ವೇಳೆಗೆ ಸೂಕ್ತ ಬಂದೋಬಸ್ತ್ ಸಹ ಮಾಡಲಾಯಿತು. ಮೃತದೇಹದ ಅಂತಿಮ ನಮನ ಸಲ್ಲಿಸಿದ ನಂತರ ಮೃತ ಸಂಬಂಧಿಕರು ಸ್ಥಳೀಯ ಮುಖಂಡರೊಂದಿಗೆ ವಾಗ್ವಾದಕ್ಕೆ ಇಳಿದು ಆರೋಪಿಗಳನ್ನು ಈ ಕೂಡಲೇ ಬಂಧಿಸಬೇಕೆಂದು ಆಗ್ರಹಿಸಿದರು. ನಂತರ ಸೂಕ್ತ ರೀತಿಯಲ್ಲಿ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸುವುದಾಗಿ ಭರವಸೆ ನೀಡಿದ ಮೇಲೆ ಪ್ರತಿಭಟನೆಯು ಶಾಂತವಾಗಿ ಮುಕ್ತಾಯಗೊಂಡಿದ್ದು, ಮೃತದೇಹವನ್ನು ಕಾವೂರು ಠಾಣಾ ವ್ಯಾಪ್ತಿಯ ಪಂಜಿಮೊಗರುನಲ್ಲಿ ದಫನ್ ಮಾಡಲಾಯಿತು. ಆ ವೇಳೆಯಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಲಾಯಿತು.

**ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಮಂಗಳೂರು ನಗರದ ಕಮಿಷನರೇಟ್ ವ್ಯಾಪ್ತಿಯಲ್ಲಿ ಈ ಕೆಳಕಂಡಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.**

- ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಮಂಗಳೂರು ಉತ್ತರ ಉಪವಿಭಾಗದ ಅಧೀನ ಠಾಣೆಗಳಾದ ಸೂರತ್ಕಲ್, ಬಜಪೆ, ಕಾವೂರು ಮತ್ತು ಪಣಂಬೂರು ಠಾಣೆಗಳ ವ್ಯಾಪ್ತಿಯಲ್ಲಿ ಕಲಂ: 144 ಸಿ.ಆರ್.ಪಿ.ಸಿ ಅನ್ವಯ ದಿನಾಂಕ: 25.12.2022 ರಂದು ಬೆಳಿಗ್ಗೆ 6:00 ಗಂಟೆಯಿಂದ ದಿನಾಂಕ: 29.12.2022 ರಂದು ಬೆಳಿಗ್ಗೆ 6:00 ಗಂಟೆಯ ವರೆಗೆ ನಿಷೇದಾಜ್ಞೆ ಜಾರಿಗೊಳಿಸಿ ಆದೇಶಿಸಲಾಗಿರುತ್ತದೆ.
- ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಮಂಗಳೂರು ಉತ್ತರ ಉಪವಿಭಾಗದ ಅಧೀನ ಠಾಣೆಗಳಾದ ಸೂರತ್ಕಲ್, ಬಜಪೆ, ಕಾವೂರು ಮತ್ತು ಪಣಂಬೂರು ಠಾಣೆಗಳ ವ್ಯಾಪ್ತಿಯಲ್ಲಿ ದಿನಾಂಕ:25.12.2022 ರಂದು ಬೆಳಿಗ್ಗೆ 10:00 ಗಂಟೆಗೆಯಿಂದ ದಿನಾಂಕ:29.12.2022 ರಂದು ಬೆಳಿಗ್ಗೆ 10:00 ಗಂಟೆಯ ವರೆಗೆ ಮದ್ಯಪಾನ ನಿಷೇದಾಜ್ಞೆ ಆದೇಶವನ್ನು ಜಿಲ್ಲಾಧಿಕಾರಿಯವರು ಮಾಡಿರುತ್ತಾರೆ.
- ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಮಂಗಳೂರು ಉತ್ತರ ಉಪವಿಭಾಗದ ಅಧೀನ ಠಾಣೆಗಳಾದ ಸೂರತ್ಕಲ್, ಬಜಪೆ, ಕಾವೂರು ಮತ್ತು ಪಣಂಬೂರು ಠಾಣೆಗಳ ವ್ಯಾಪ್ತಿಯಲ್ಲಿರುವ ಕೈಗಾರಿಕೆ ಹಾಗೂ ವಾಣಿಜ್ಯ ಸಂಕೀರ್ಣಗಳಲ್ಲಿ ಕೆಲಸ ನಿರ್ವಹಿಸುವ ಸಿಬ್ಬಂದಿಗಳ ಕರ್ತವ್ಯದ ಪಾಳಿಯನ್ನು ಸಂಜೆ 06.00 ಗಂಟೆಯ ಒಳಗಾಗಿ ಬದಲಾಯಿಸುವಂತೆ ಹಾಗೂ ಸಂಜೆ 06.00 ಗಂಟೆಯಿಂದ ಬೆಳಿಗ್ಗೆ 06.00 ಗಂಟೆಯವರೆಗೆ ಸಿಬ್ಬಂದಿಯವರು ರಸ್ತೆಗಳಲ್ಲಿ ಸಂಚರಿಸದಂತೆ ಸಂಸ್ಥೆಯ ಮುಖ್ಯಸ್ಥರಿಗೆ ಸೂಚಿಸುವಂತೆ ಸೂರತ್ಕಲ್, ಬಜಪೆ, ಕಾವೂರು ಮತ್ತು ಪಣಂಬೂರು ಠಾಣೆಯ ಠಾಣಾಧಿಕಾರಿಗಳಿಗೆ ಸೂಚಿಸಲಾಗಿದೆ.

<u>ಆರೋಪಿಗಳ ದಸ್ತಗಿರಿ</u>

1. ಶೈಲೇಶ್ ಪೂಜಾರಿ (20) ತಂದೆ ಕೇಶವ್ ಸಲೀಲ್, ವಾಸ: ಮನೆ ನಂಬರ್ 5/23, ಸೈಟ್ ನಂಬರ್ 314 ಲಕ್ಷ್ಮಿ ನಿವಾಸ ನೈತಂಗಡಿ, 5ನೇ ಬ್ಲಾಕ್ ಮುಡಾಯಿಕೊಡಿ, ಕೃಷ್ಣಾಪುರ ಕಾಟಿಪಳ್ಳ ಗ್ರಾಮ ಮಂಗಳೂರು ತಾಲ್ಲೂಕು.
2. ಸುವಿನ್ ಕಾಂಚನ್ @ ಮುನ್ನಾ (24) ತಂದೆ; ದಾಮೋದರ್ ವಾಸ: ಗುಡ್ಡ ಹೌಸ್, ಎನ್.ಎಸ್ ರಸ್ತೆ ಹೆಜಮಾಡಿ, ಉಡುಪಿ
3. ಪವನ @ ಪಚ್ಚು (23) ತಂದೆ ಮೋನಪ್ಪ ವಾಸ: 8/96, ಆಶ್ರಯ ಕಾಲೋನಿ 3 ನೇ ಬ್ಲಾಕ್ ಕೃಷ್ಣಾಪುರು ಕಾಟಿಪಳ್ಳ ಗ್ರಾಮ ಮಂಗಳೂರು ತಾಲ್ಲೂಕು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಮುಂದುವರಿಸಿ ಈ ಮೇಲಿನ 3 ಜನ ಆರೋಪಿತರನ್ನು ದಸ್ತಗಿರಿ ಮಾಡಿದ್ದು ತನಿಖೆ ಮುಂದುವರಿಸಲಾಗಿದೆ. ಆರೋಪಿತರನ್ನು ಪೊಲೀಸ್ ಕಸ್ಟಡಿಗೆ ತೆಗೆದುಕೊಂಡು ಹೆಚ್ಚಿನ ವಿಚಾರಣೆ ನಡೆಸಲಾಗುವುದು.

ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಮಂಗಳೂರು ನಗರದ ಅಧಿಕಾರಿ ಮತ್ತು ಸಿಬ್ಬಂದಿಯವರನ್ನು ಹಾಗೂ ನೆರೆ ಜಿಲ್ಲೆಯ ಅಧಿಕಾರಿ/ಸಿಬ್ಬಂದಿಯವರನ್ನು ಪಾಳಿಯಂತೆ ಬಂದೋಬಸ್ತ್ ಕರ್ತವ್ಯಕ್ಕೆ ನಿಯೋಜಿಸಿದ್ದು, ಪ್ರಹಾರ ದಳವನ್ನು ಕೂಡ ಆಯಕಟ್ಟಿನ ಹಾಗೂ ಸೂಕ್ಷ್ಮ ಪ್ರದೇಶದಲ್ಲಿ ನೇಮಕ ಮಾಡಲಾಗಿರುತ್ತದೆ. ಪರಿಸ್ಥಿತಿಯು ಪ್ರಸ್ತುತ ಶಾಂತವಾಗಿದ್ದು ಪರಿಸ್ಥಿತಿಯ ಮೇಲೆ ನಿಗಾ ಇರಿಸಲಾಗಿದೆ.

**ಸಂಖ್ಯೆ: ಹೆಚ್‌ಡಿ 731 ಎಸ್ ಎಸ್ ಟಿ 2022**

(ಆರಗ ಜ್ಞಾನೇಂದ್ರ)

ಗೃಹ ಸಚಿವರು